# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ನಿರ್ದೇಶಕರು ನಗರ ಯೋಜನೆ, ಮಹದೇವಪುರ ವಲಯ, ಬೆಂಗಳೂರು.

ಸಂಖ್ಯೆ: ಬಿಬಿಎಂಪಿ/ನಯೋ/ಮವ/20/2016-17 ದಿನಾಂಕ: 20/07/2016

## 'ಪ್ರಾರಂಭಿಕ ಪ್ರಮಾಣ ಪತ್ರ'

**ವಿಷಯ:-** ಸಂಖ್ಯೆ: ಬಿಬಿಎಂಪಿ/ಮವ/ನಯೋ/ಎಲ್.ಪಿ/194/2014-15 ದಿ:28/01/2015 ರಂದು ನಕ್ಷೆ ಪರವಾನಿಗೆ ಪಡೆದಿರುವ ವಸತಿ ಸಮುಚ್ಚಯ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲು ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:-** 1) ತಮ್ಮ ಮನವಿ ಪತ್ರದ ದಿನಾಂಕ:27/06/2016.

2) ಈ ಕಛೇರಿ ಸೂಚನಾ ಪತ್ರ ದಿನಾಂಕ:04/07/2016.

*****

ಬೆಂಗಳೂರು ಪೂರ್ವ ತಾಲ್ಲೂಕು ಬಿದರಹಳ್ಳಿ ಹೋಬಳಿ, ಚನ್ನಸಂದ್ರ ಗ್ರಾಮದ ಸರ್ವೆ ನಂ.115 Block No.15 ಖಾತಾ ಸಂಖ್ಯೆ:716, ರ ಆಸ್ತಿಯನ್ನು ದಿನಾಂಕ:04/07/2016 ರಂದು ಸಹಾಯಕ ನಿರ್ದೇಶಕರು, ನಗರ ಯೋಜನೆ ಮಹದೇವಪುರ ವಲಯ ರವರು ಸಹಾಯಕ ಅಭಿಯಂತರರೊಡನೆ ಪರಿವೀಕ್ಷಣೆ ಮಾಡಲಾಗಿ ಸ್ಟಿಲ್ಟ್ ಅಂತಸ್ತಿನಲ್ಲಿ ನಿರ್ಮಿಸಿರುವ ಸ್ಥಂಭಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಸಂಖ್ಯೆ:ಬಿಬಿಎಂಪಿ/ಮವ/ನಯೋ/ಎಲ್.ಪಿ/194/2014-15, ದಿನಾಂಕ:28/01/2015 ರಂದು ಮಂಜೂರಾಗಿರುವ ನಕ್ಷೆಗೆ ಹೋಲಿಕೆ ಮಾಡಲಾಗಿ ಈ ನಡುಜಾಗಗಳು ಮಂಜೂರಾತಿ ನೀಡಿರುವ ನಕ್ಷೆಯಂತೆ ಬೈಲಾ ಪ್ರಕಾರ ಇರುವುದು ಕಂಡುಬಂದಿದೆ. ಪ್ರಾರಂಭಿಕ ಪ್ರಮಾಣ ಪತ್ರ ಪಡೆಯಲು ಪಾವತಿಸಬೇಕಾದ ಶುಲ್ಕ ರೂ.45,210/-ಗಳನ್ನು ಫಾವತಿಸಲು ಉಲ್ಲೇಖ (2) ರಲ್ಲಿ ತಿಳಿಸಿದ್ದು ತಾವು ರೂ.46,000/-ಡಿ.ಡಿ.ಸಂಖ್ಯೆ:435540 ದಿ:16/07/2016 ರಲ್ಲಿ ಪಡೆದಿರುವ ಡಿ.ಡಿ.ಯನ್ನು ದಿನಾಂಕ:20/07/2016 ರಲ್ಲಿ ಈ ಕಛೇರಿಗೆ ಸಲ್ಲಿಸಿರುತ್ತೀರಿ, ಸದರಿ ಮೊತ್ತವನ್ನು ದಿನಾಂಕ:20/07/2016 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೊಕ್ಕಸಕ್ಕೆ ಪಾವತಿಸಲಾಗಿದೆ.

ಆದ್ದರಿಂದ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಕಾಮಗಾರಿಯನ್ನು ಮುಂದುವರಿಸಲು ಈ ಮೂಲಕ ಅನುಮೋದನೆ ನೀಡಲಾಗಿದೆ.

1. ಯಾವುದೇ ಬದಲಾವಣೆಗಳನ್ನಾಗಲೀ, ಮಾರ್ಪಾಡುಗಳನ್ನಾಗಲೀ ಅಥವಾ ಉಲ್ಲಂಘನೆಗಳನ್ನಾಗಲೀ ಮಾಡದೆ ಕಟ್ಟುನಿಟ್ಟಾಗಿ ಮಂಜೂರಾತಿ ನೀಡಿರುವ ನಕ್ಷೆಯ ಮತ್ತು ಕಟ್ಟಡ ಉಪವಿಧಿಗಳ ಪ್ರಕಾರವೇ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದು.
2. ಕಾಮಗಾರಿಯು, ಅಡಿಪಾಯದ ಅಥವಾ ಸ್ಥಂಭಗಳ ಆಧಾರ ಅಥವಾ ಸ್ಥಂಭಗಳ ಸ್ಥಿರೀಕರಣ ಕಾರ್ಯವು ಪೂರ್ಣಗೊಂಡ ಹಂತವನ್ನು ತಲುಪಿದಾಗ ನಿರ್ಮಾಣವನ್ನು ಮಂಜೂರಾತಿ ನೀಡಿರುವ ನಕ್ಷೆಯ ಮತ್ತು ಕಟ್ಟಡ ಉಪವಿಧಿಗಳ ಪ್ರಕಾರ ಕೈಗೊಂಡಿರುವ ಬಗ್ಗೆ ಕಾಮಗಾರಿಯನ್ನು ಪರಿವೀಕ್ಷಣೆ ಮತ್ತು ಶೋಧನೆ ಮಾಡಲು ನೆರವು ನೀಡುವ ದೃಷ್ಟಿಯಿಂದ ಮಹಾನಗರ ಪಾಲಿಕೆಗೆ ಸಂದೇಶವನ್ನು ಕಳುಹಿಸತಕ್ಕದ್ದು ಹಾಗೂ ಕಟ್ಟಡ ಪೂರ್ಣಗೊಂಡ ನಂತರ ಸ್ವಾಧೀನಾನುಭವ ಪತ್ರವನ್ನು ಪಡೆಯಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂದೇಶವನ್ನು ಕಳುಹಿಸತಕ್ಕದ್ದು ಹಾಗೂ ಸ್ವಾಧೀನಾನುಭವ ಪತ್ರವನ್ನು ಪಡೆಯುವುದು.
3. ಕಾಲಕಾಲಕ್ಕೆ ಸಂದರ್ಭಾನುಸಾರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ನೀಡುವ ಸೂಚನೆಗಳನ್ನು ಪಾಲಿಸತಕ್ಕದ್ದು ಹಾಗೂ ಮಂಜೂರಾತಿ ಸಮಯದಲ್ಲಿ ನೀಡಿರುವ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.

20/7

ಸಹಾಯಕ ನಿರ್ದೇಶಕರು ನಗರ ಯೋಜನೆ
ಬೃ.ಬೆಂ.ಮ.ಪಾ., ಮಹದೇವಪುರ
ಬೆಂಗಳೂರು-48

20/7/16

ರವರಿಗೆ,

M/s Umrah Developers Rep by Sri Yusuf Shariff
GPA Holder M/s M V S Developers Rep by
Sri J Muralidhar Reddy
No.1823/1, 3rd Floor, 41st Cross,
9th Block, Jayanagar,
Bangalore-69.